ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

23.

ಇಲಾಖೆ / ವಿಷಯ : DEPARTMENT / SUBJECT: ನಿಧನ ಸುದ್ದಿಗಳ ಬಗ್ಗೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 14/3/21

ಹಿಮಾಚಲ ಪ್ರದೇಶದ ಬಿಜೆಪಿ ಸಂಸದ ರಾಮ್ ಸ್ವರೂಪ್ ಶರ್ಮಾ ಆತ್ಮಹತ್ಯೆ!

ಹೊಸದಿಲ್ಲಿ: ಹಿಮಾಚಲ ಪ್ರದೇಶದ ಬಿಜೆಪಿ ಸಂಸದ ರಾಮ್ ಸ್ವರೂಪ್ ಶರ್ಮಾ (62) ಅವರು ದಿಲ್ಲಿಯ ನಿವಾಸದಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಮೃತಪಟ್ಟಿದ್ದು, ಆತ್ಮಹತ್ಯೆಗೆ ಶರಣಾಗಿರಬಹುದೆಂದು ಶಂಕಿಸಲಾಗಿದೆ.

ಸೀಲಿಂಗ್ ಫ್ಯಾನ್‌ಗೆ ನೇತಾಡುತ್ತಿದ್ದ ಶರ್ಮಾ ಅವರನ್ನು ಕೂಡಲೇ ಆಸ್ಪತ್ರೆಗೆ ಸಾಗಿಸಲಾಯಿತಾದರೂ, ಆಸ್ಪತ್ರೆಗೆ ಕರೆತರುವ ಮೊದಲೇ ಮೃತಪಟ್ಟಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

ಸಾವಿಗೆ ನಿಖರ ಕಾರಣ ತಿಳಿದು ಬಂದಿಲ್ಲ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಕಳುಹಿಸಲಾಗಿದೆ. ತೀವ್ರ ಆನಾರೋಗ್ಯ ಸಮಸ್ಯೆಗಳಿಂದ ಶರ್ಮಾ ಬಳಲುತ್ತಿದ್ದರು ಎಂದು ಕುಟುಂಬ ಮೂಲಗಳು ತಿಳಿಸಿವೆ. ಶರ್ಮಾ ಅವರ ಸಾವಿನ ಹಿನ್ನೆಲೆಯಲ್ಲಿ ಬುಧವಾರ ನಿಗದಿಯಾಗಿದ್ದ ಬಿಜೆಪಿ ಸಂಸದೀಯ ಪಕ್ಷದ ಸಭೆಯನ್ನು ಮುಂದೂಡಲಾಗಿದೆ.

ಶರ್ಮಾ ಅವರು ದಿಲ್ಲಿ ನಿವಾಸದಲ್ಲಿ ಒಂಟಿಯಾಗಿದ್ದರು. ಅವರ ಪತ್ನಿ ತೀರ್ಥಯಾತ್ರೆಗೆ ತೆರಳಿದ್ದರು. ಕಳೆದ ಆರು ತಿಂಗಳಿನಿಂದ ಅವರು ತೀವ್ರ ಖಿನ್ನತೆಯಿಂದ ಬಳಲುತ್ತಿದ್ದರು ಮತ್ತು ಚಿಕಿತ್ಸೆ ಪಡೆಯುತ್ತಿದ್ದರು ಎನ್ನಲಾಗಿದೆ.

ಪ್ರಧಾನಿ ಮೋದಿ ಅವರು ರಾಮ್ ಸ್ವರೂಪ್ ಶರ್ಮಾ ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

ಹಿಮಾಚಲ ಪ್ರದೇಶದ ಮಂಡಿ ಜಿಲ್ಲೆಯಲ್ಲಿ 1958ರಲ್ಲಿ ಜನಿಸಿದ್ದ ಶರ್ಮಾ, 2014ರಲ್ಲಿ ಮೊದಲ ಬಾರಿ ಸಂಸತ್ತಿಗೆ ಆಯ್ಕೆಯಾಗಿದ್ದರು. 2019ರ ಚುನಾವಣೆಯಲ್ಲಿ ಅವರು ಮಂಡಿಯಿಂದ ಎರಡನೆಯ ಬಾರಿ ಚುನಾಯಿತರಾಗಿದ್ದರು. ವಿದೇಶಾಂಗ ವ್ಯವಹಾರಗಳ ಸಂಸದೀಯ ಸ್ಥಾಯಿ ಸಮಿತಿಯಲ್ಲಿ ಅವರು ಕಾರ್ಯನಿರ್ವಹಿಸಿದ್ದರು.